ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕರ್ನಾಟಕ ವಿಧಾನ ಸಭೆ ಶಾಸಕರು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 18/6/2020

# ಪರಮೇಶ್ವರ ನಾಯ್ಕ್ ವಿರುದ್ಧ ಕೊನೆಗೂ ಎಫ್‌ಐಆರ್ ದಾಖಲು

ಬಳ್ಳಾರಿ: ಮಗನ ಮದುವೆಯಲ್ಲಿ ಹೆಚ್ಚಿನ ಜನ ಸೇರಿಸುವ ಮೂಲಕ ಲಾಕ್‌ಡೌನ್ ನಿಯಮ ಉಲ್ಲಂಘನೆ ಮಾಡಿದ್ದ ಹಡಗಲಿ ಶಾಸಕ ಪಿ.ಟಿ.ಪರಮೇಶ್ವರ್ ನಾಯ್ಕ್ ವಿರುದ್ಧ ಜಿಲ್ಲೆಯ ಹರಪನಹಳ್ಳಿ ತಾಲೂಕು ಅರಸಿಕೆರೆ ಠಾಣೆಯಲ್ಲಿ ಕೊನೆಗೂ ಬುಧವಾರ ಪ್ರಕರಣ ದಾಖಲಾಗಿದೆ. ಶಾಸಕ ಪಿ.ಟಿ. ಪರಮೇಶ್ವರ ನಾಯ್ಕ್ ಜೂ.15ರಂದು ಸೋಮವಾರ ಜಿಲ್ಲೆಯ ಹರಪನಹಳ್ಳಿ ತಾಲೂಕು ಲಕ್ಷ್ಮೀಪುರದಲ್ಲಿ ಮಗನ ಮದುವೆ ಮಾಡಿದ್ದರು. ಲಾಕ್‌ಡೌನ್ ನಿಯಮ ಉಲ್ಲಂಘಿಸಿ ಮದುವೆಯಲ್ಲಿ ನೂರಾರು ಜನರನ್ನು ಸೇರಿಸಿದ್ದರು. ಈ ಬಗ್ಗೆ ಮಾಧ್ಯಮಗಳಲ್ಲಿ ಸುದ್ದಿ ಬಿತ್ತರವಾಗುತ್ತಿದ್ದಂತೆ ಎಚ್ಚೆತ್ತುಕೊಂಡ ಜಿಲ್ಲಾಧಿಕಾರಿ ಎಸ್.ಎಸ್.ನಕುಲ್ ಸೂಚನೆ ಮೇರೆಗೆ ಹರಪನಹಳ್ಳಿ ತಹಶೀಲ್ದಾರ್ ನಾಗವೇಣಿ ಅವರು ಶಾಸಕ ಪಿ.ಟಿ.ಪರಮೇಶ್ವರ್ ನಾಯ್ಕ್ ಮತ್ತವರ ಮಗ ಪಿ.ಟಿ.ಭರತ್ ವಿರುದ್ಧ ಅರಸಿಕೆರೆ ಠಾಣೆಯಲ್ಲಿ ದೂರು ನೀಡಿದ್ದರು. ಆದರೆ, ಇದಕ್ಕೆ ಎಫ್‌ಐಆರ್ ದಾಖಲು ಮಾಡಲು ನ್ಯಾಯಾಲಯದ ಅನುಮತಿ ಪಡೆಯಬೇಕು ಎಂಬ ಹಿನ್ನೆಲೆಯಲ್ಲಿ ಪ್ರಕರಣ ದಾಖಲು ವಿಳಂಬವಾಗಿತ್ತು. ಇದೀಗ ನ್ಯಾಯಾಲಯದಿಂದ ಅನುಮತಿ ದೊರೆತ ಹಿನ್ನೆಲೆಯಲ್ಲಿ ಪ್ರಕರಣ ದಾಖಲಾಗಿದೆ.